## *SDVS Sangh's*

## *Shri. L. K. Khot College of Commerce Sankeshwar*

SDVS Sangh's Shri L. K. Khot College of Commerce is one of the premier institutionsof Shri SDVS Sangh's Sankeshwar. The institute had reaccredited at 'B' level by NAAC in 4$^{th}$ Cycle. Institution has introduced many schemes to promote welfare of students

During 2018-2019 institution has introduced Post Graduate M. Com in commerce which helps students up to complete their higher education most of the students were availed benefit from this programme.

During 2022 QCL Certification Pvt. Ltd New Delhi has certified quality management system of SDVS Sangh's Shri L.K.Khot College of Commerce, Sankeshwar. QCL has been assessed and found conform to the requirement of ISO 9001:2015 for the scopeof providing services of B. Com,M. Com and certificate courses.



# ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 211 ಯುಆರ್‌ಸಿ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 26-06-2018

ಇಂದ
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು - 560 001.

ಇವರಿಗೆ
ಕುಲಸಚಿವರು,
ರಾಣಿ ಚನ್ನಮ್ಮ ವಿಶ್ವವಿದ್ಯಾಲಯ,
ಬೆಳಗಾವಿ.

ಮಾನ್ಯರೆ,

ವಿಷಯ : 2018-19ನೇ ಸಾಲಿನಲ್ಲಿ ಶ್ರೀ ಎಲ್.ಕೆ.ಖೋತ ವಾಣಿಜ್ಯ ಮಹಾವಿದ್ಯಾಲಯ, ಸಂಕೇಶ್ವರ ಅಂಚೆ-591313, ಹುಕ್ಕೇರಿ ತಾಲ್ಲೂಕ್ ಬೆಳಗಾವಿ ಜಿಲ್ಲೆ - ಇಲ್ಲಿ ಹೊಸ ಸ್ನಾತಕೋತ್ತರ ಕೋರ್ಸನ್ನು ಪ್ರಾರಂಭಿಸಲು ಕುರಿತು.

ಉಲ್ಲೇಖ : ತಮ್ಮ ಪತ್ರ ಸಂಖ್ಯೆ :ರಾಚವಿವಿಬೆ/ಕುಸಕಾ/2017-18/4, ದಿನಾಂಕ: 31-3-2018

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2018-19ನೇ ಶೈಕ್ಷಣಿಕ ಸಾಲಿನಿಂದ ಶ್ರೀ ದುರದುಂಡೀಶ್ವರ ವಿದ್ಯಾ ಸಂವರ್ಧಕ ಸಂಘ, ಸಂಕೇಶ್ವರ ಅಂಚೆ-591313, ಹುಕ್ಕೇರಿ ತಾಲ್ಲೂಕ್ ಬೆಳಗಾವಿ ಜಿಲ್ಲೆ, ಇವರು ಶ್ರೀ ಎಲ್.ಕೆ.ಖೋತ ವಾಣಿಜ್ಯ ಮಹಾವಿದ್ಯಾಲಯ, ಸಂಕೇಶ್ವರ ಅಂಚೆ-591313, ಹುಕ್ಕೇರಿ ತಾಲ್ಲೂಕ್ ಬೆಳಗಾವಿ ಜಿಲ್ಲೆ -ಇಲ್ಲಿ ಹೊಸ ಸ್ನಾತಕೋತ್ತರ ಕೋರ್ಸನ್ನು ಪ್ರಾರಂಭಿಸಲು ಸಂಯೋಜನೆ ಕೋರಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದ ಅರ್ಜಿಯನ್ನು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣಾ ಸಮಿತಿಯ ವರದಿ ಮತ್ತು ವಿದ್ಯಾವಿಷಯಕ ಪರಿಷತ್‌ನ ಸಮಾಲೋಚನೆಯೊಂದಿಗೆ ಸಿಂಡಿಕೇಟ್ ಮಾಡಿರುವ ಶಿಫಾರಸ್ಸನ್ನು ಆಧರಿಸಿ ಸಂವೀಕ್ಷಿಸಲಾಗಿದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ (11)ನೇ ಉಪಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, **2018-19ನೇ ಶೈಕ್ಷಣಿಕ ಸಾಲಿನಿಂದ ಶ್ರೀ ಎಲ್.ಕೆ.ಖೋತ ವಾಣಿಜ್ಯ ಮಹಾವಿದ್ಯಾಲಯ, ಸಂಕೇಶ್ವರ ಅಂಚೆ-591313, ಹುಕ್ಕೇರಿ ತಾಲ್ಲೂಕ್ ಬೆಳಗಾವಿ ಜಿಲ್ಲೆ** ಇಲ್ಲಿ ಈ ಕೆಳಕಂಡಂತೆ ಹೊಸ ಸ್ನಾತಕೋತ್ತರ ಕೋರ್ಸನ್ನು ಪ್ರಾರಂಭಿಸಲು ಸಂಯೋಜನೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರು ಮಾಡುವಂತೆ ಸರ್ಕಾರದ ಶಿಫಾರಸ್ಸನ್ನು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಎಂ.ಕಾಂ | ವಿಶ್ವವಿದ್ಯಾಲಯದ ಪಠ್ಯಕ್ರಮದಂತೆ ಎಲ್ಲ ಕಡ್ಡಾಯ ವಿಷಯಗಳು | 20 (ಇಪ್ಪತ್ತು) |

**ಷರತ್ತುಗಳು:-**

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;

2. ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
5. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
6. ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
7. ದಿನಾಂಕ: 13-8-1997 ರಂದು ವಿಶಾಖ V/S ರಾಜಸ್ತಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;
8. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.
9. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;
10. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.
11. ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.
12. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ,

21/06/18

(ಎಂ.ವಿ.ಅಹಮದ್ ಜಾನ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು -2)

26/6/2018

ಪ್ರತಿ:-

1. ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು - 560 001.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಧಾರವಾಡ
3. ಪ್ರಾಂಶುಪಾಲರು, ಶ್ರೀ ಎಲ್.ಕೆ.ಖೋತ ವಾಣಿಜ್ಯ ಮಹಾವಿದ್ಯಾಲಯ, ಸಂಕೇಶ್ವರ ಅಂಚೆ-591313, ಹುಕ್ಕೇರಿ ತಾಲ್ಲೂಕ್ ಬೆಳಗಾವಿ ಜಿಲ್ಲೆ

*****

# CERTIFICATE

This is to certify that

*Quality Management System of*

## SDVS SANGH'S
## SHRI. L. K. KHOT COLLEGE OF COMMERCE, SANKESHWAR

SRI L K KHOT COLLEGE OF COMMERCE OLD PB ROAD, SANKESHWAR, HUKKERI, BELGAUM, KARNATAKA 591313, INDIA.

*Has been assessed and found to conform to the requirements of*

## ISO 9001:2015

**For the following scope**

PROVIDING SERVICES OF B. COM, M. COM & CERTIFICATE COURSES.

| | | |
|---|---|---|
| **CERTIFICATE NO.** | : | QCLQ220409465 |
| Initial Registration Date | : | 09/04/2022 |
| Issuance Date | : | 09/04/2022 |
| Surveillance Assessment | | |
| I Due Date | : | 08/04/2023 |
| II Due Date | : | 08/04/2024 |
| Date of Re-Certification | : | 08/04/2025 |

DIRECTOR

**QCL Certification Pvt. Ltd.**

Visit: www.qclcertification.org | www.qclcertification.com

#95, 2nd Floor, E-3 Block, KG. M.B. Ext., Badarpur Border, New Delhi-110044

Accredited by: Bureau of International Accreditation Assessment for Certification Bodies

iaacb.com/register